<u>**ದಿನಾಂಕಃ 22.05.2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**</u>

<u>**ಮುಂದುವರೆದ ಮುಖ್ಯ ವಿಚಾರಣೆಃ 4 ನೇ ಪ್ರತಿವಾದಿ ಪರ ಶ್ರೀ.ಜಿ ಆರ್ ಎಸ್ ವಕೀಲರಿಂದಃ**</u>

ಅಸಲು ದಾವಾ ಸಂಖ್ಯೆ 37/2014 ರಲ್ಲಿನ ವಾದ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ-1 ಎಂದು, ಅಸಲು ದಾವಾ ಸಂಖ್ಯೆ 256/2013 ರಲ್ಲಿನ ವಾದ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ-2 ಎಂದು, ಅಸಲು ದಾವಾ ಸಂಖ್ಯೆ 256/2013 ರಲ್ಲಿನ ಪ್ರತಿವಾದ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಡಿ-3 ಎಂದು, ದಿನಾಂಕ 11.10.2013 ರ ತಿಳುವಳಿಕೆ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಡಿ-4 ಎಂದು, ದಿನಾಂಕ 17.10.2013 ರ ಪ್ರತ್ಯುತ್ತರ ತಿಳುವಳಿಕೆ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಡಿ-5 ಎಂದು, ದಿನಾಂಕ 10.10.2011 ರ ಕ್ರಯ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಡಿ-6 ಎಂದು, ಹಕ್ಕು ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಡಿ-7 ಎಂದು, 2011 ರಿಂದ 2017 ರವರೆಗಿನ ಋಣಭಾರ ರಾಹಿತ್ಯ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಡಿ-8 ಎಂದು, ರಶೀದಿಯ ದೃಢೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಡಿ-9 ಎಂದು, 2012-13 ನೇ ಸಾಲಿನ ಡಿಮ್ಯಾಂಡಿ ರಿಜಿಸ್ಟರ್ ನ ದೃಢೀಕೃತ ನಕಲನ್ನು ಹಾಜರು ಪಡಿಸುತ್ತಿದ್ದು ಅದನ್ನು ನಿಡಿ-10 ಎಂದು ಗುರುತಿಸಲಾಯಿತು.

<u>ಈ ಹಂತದಲ್ಲಿ ವಾದಿ ಪರ ವಕೀಲರು ಪಾಟೀಸವಾಲಿಗೆ ಕಾಲಾವಕಾಶ ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

ಹೆಚ್ಚುವರಿ ಸಿವಿಲ್ ಮತ್ತು ಜೆ ಎಮ್ ಎಫ್ ಸಿ
ನ್ಯಾಯಾಧೀಶರು, ತಿ.ನರಸಿಪುರ